# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ    ದಿನಾಂಕ : DATE : 30/06/2019

### ನಾಳೆಯಿಂದ ವಿಧಾನಸೌಧ, ವಿಕಾಸಸೌಧ ಸಿಬ್ಬಂದಿಗೆ ಸ್ಮಾರ್ಟ್ ಕಾರ್ಡ್ ಕಡ್ಡಾಯ

» ಅಧೀನ ಕಾರ್ಯದರ್ಶಿ ಸುತ್ತೋಲೆ

**ಬೆಂಗಳೂರು:** ಭದ್ರತೆ ಹಾಗೂ ಸುರಕ್ಷತೆಯ ದೃಷ್ಟಿಯಿಂದ ವಿಧಾನಸೌಧ, ವಿಕಾಸಸೌಧ ಹಾಗೂ ಬಹುಮಹಡಿ ಕಟ್ಟಡಗಳಲ್ಲಿ ಕೆಲಸ ಕಾರ್ಯನಿರ್ವಹಿಸುತ್ತಿರುವ ಸಚಿವಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಜುಲೈ 1ರಿಂದ ಟ್ಯಾಗ್ ಹೊಂದಿರುವ ಸ್ಮಾರ್ಟ್ ಕಾರ್ಡ್‌ಗಳನ್ನು ಕಡ್ಡಾಯವಾಗಿ ಧರಿಸುವಂತೆ ನಿರ್ದೇಶಿಸಲಾಗಿದೆ. ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧೀನ ಕಾರ್ಯದರ್ಶಿ ಶನಿವಾರ ಸುತ್ತೋಲೆ ಹೊರಡಿಸಿದ್ದು, ಸಚಿವಾಲಯದ ಸಿಬ್ಬಂದಿ ವಿಧಾನಸೌಧ, ವಿಕಾಸಸೌಧ ಹಾಗೂ ಬಹುಮಹಡಿ ಕಟ್ಟಡದ ಒಳ ಪ್ರವೇಶಿಸುವ ಸಂದರ್ಭ ಹಾಗೂ ಕೆಲಸ ನಿರ್ವಹಿಸುವ ಸಂದರ್ಭದಲ್ಲಿ ಸ್ಮಾರ್ಟ್‌ಕಾರ್ಡ್ ಧರಿಸುವುದು ಕಡ್ಡಾಯವೆಂದು ಸೂಚಿಸಲಾಗಿದೆ. ಅಲ್ಲದೆ, ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ ನೀಡಲಾಗಿರುವ ಗುರುತಿನ ಚೀಟಿಗಳನ್ನು ಕಡ್ಡಾಯವಾಗಿ ಜತೆಗಿರಿಸಿಕೊಳ್ಳುವಂತೆ ಹಾಗೂ ಗುರುತಿನ ಚೀಟಿ ಕೋರಿದಾಗ ಪ್ರದರ್ಶಿಸುವಂತೆ ಸೂಚನೆ ನೀಡಲಾಗಿದೆ. ಭದ್ರತೆಯ ಕಾರಣಗಳಿಂದ ಫೆಬ್ರವರಿ ತಿಂಗಳಿಂದ ಈ ಹಿಂದೆ ನೀಡಿದ್ದ ಗುರುತಿನ ಚೀಟಿಗಳನ್ನು ಹಿಂಪಡೆದು ಹೊಸ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸಲಾಗಿತ್ತು.

30/6/19